# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | 853 |
| ಸದಸ್ಯರ ಹೆಸರು | ಶ್ರೀ ಬಿ.ಜಿ. ಪಾಟೀಲ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | 14-07-2023 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ತೊಗರಿ ಬೆಳೆಯುವ ಕಲ್ಯಾಣ ನಾಡಿನ ಕಲಬುರಗಿ ಜಿಲ್ಲೆಯಲ್ಲಿ ನೆಟೆರೋಗ, ಮಳೆಯಿಂದಾಗಿ ಇಳುವರಿಯಲ್ಲಿ ಭಾರಿ ಕುಸಿತ ಕಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ತೊಗರಿ ಬೆಳೆಯುವ ಕಲ್ಯಾಣ ನಾಡಿನ ಕಲಬುರಗಿ ಜಿಲ್ಲೆಯಲ್ಲಿ ನೆಟೆರೋಗ ಹಾಗೂ ಹೆಚ್ಚು ಮಳೆ ಬಾಧಿತ ಪ್ರದೇಶಗಳಲ್ಲಿ 2022-23ನೇ ಸಾಲಿನಲ್ಲಿ ಇಳುವರಿಯಲ್ಲಿ ಕುಸಿತ ಕಂಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯದ ವರದಿಯನ್ವಯ 2021-22ನೇ ಸಾಲಿನಲ್ಲಿ ಕಲಬುರಗಿ ಜಿಲ್ಲೆಯಲ್ಲಿ ತೊಗರಿ ಬೆಳೆಯ ಇಳುವರಿಯು ಪ್ರತಿ ಹೆಕ್ಟೇರ್‌ಗೆ 916 ಕೆ.ಜಿ ಹಾಗೂ 2022-23ನೇ ಸಾಲಿಗೆ 904 ಕೆ.ಜಿ (ಮೂರನೇ ಮುಂಗಡ ಅಂದಾಜಿನಂತೆ) ಇಳುವರಿ ಇರುತ್ತದೆ. |
| ಆ) | ಕಲಬುರಗಿ ಜಿಲ್ಲೆಯಲ್ಲಿ ಎಷ್ಟು ಲಕ್ಷ ಮೆಟ್ರಿಕ್ ಟನ್ ತೊಗರಿ ಬೇಳೆಯನ್ನು ಉತ್ಪಾದನೆ ಮಾಡಲಾಗುತ್ತಿದೆ ಹಾಗೂ ಎಷ್ಟು ಲಕ್ಷ ಪ್ರದೇಶದಲ್ಲಿ ತೊಗರಿ ಬಿತ್ತನೆ ಮಾಡಲಾಗುತ್ತಿದೆ; (ವಿವರ ನೀಡುವುದು) | 2022-23ನೇ ಸಾಲಿನಲ್ಲಿ ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯದ ವರದಿಯನ್ವಯ ಕಲಬುರಗಿ ಜಿಲ್ಲೆಯಲ್ಲಿ ತೊಗರಿ ಬೆಳೆಯು 4.86 ಲಕ್ಷ ಹೆಕ್ಟೇರ್ ಗಳಲ್ಲಿ ಬಿತ್ತನೆಯಾಗಿದ್ದು, 4.30 ಲಕ್ಷ ಟನ್ ಉತ್ಪಾದನೆ ಆಗಿರುವುದೆಂದು ಅಂದಾಜಿಸಲಾಗಿದೆ. |
| ಇ) | ಕಲಬುರಗಿ ಜಿಲ್ಲೆಯ ತೊಗರಿ ಬೆಳೆಗಾರರು ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ತೊಗರಿ ಬೆಳೆಗಾರರ ನೆರವಿಗೆ ಸರ್ಕಾರ ವಿಶೇಷ ಪ್ಯಾಕೇಜ್ ಘೋಷಿಸುವ ಯೋಚನೆ ಸರ್ಕಾರದ ಮುಂದಿದೆಯೆ; ಹಾಗಿದ್ದಲ್ಲಿ ಯಾವಾಗ ಘೋಷಿಸಲಾಗುವುದು? (ವಿವರ ನೀಡುವುದು) | 2022-23ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬಿತ್ತನೆಯಾದ ನೆಟೆ ರೋಗದಿಂದ ತೊಗರಿ ಬೆಳೆ ಹಾನಿಗೊಳಗಾದ ರೈತರ ನೆರವಿಗೆ ಧಾವಿಸಿ "ವಿಶೇಷ ಪ್ರಕರಣ"ವೆಂದು ರಾಜ್ಯ ಸರ್ಕಾರ ತೀರ್ಮಾನಿಸಿ, ಬಾಧಿತ ರೈತರ ಪ್ರತಿ ಹೆಕ್ಟೇರ್‌ಗೆ ರೂ. 10,000/- ದಂತೆ ಗರಿಷ್ಟ 2 ಹೆಕ್ಟೇರ್‌ಗೆ ಸೀಮಿತಗೊಳಿಸಿ ಎನ್.ಡಿ.ಆರ್.ಎಫ್ /ಎಸ್.ಡಿ.ಆರ್.ಎಫ್. ಮಾರ್ಗಸೂಚಿಯಂತೆ ರೂ.223.00 ಕೋಟಿ ಪರಿಹಾರವನ್ನು ನೀಡಲು ಸರ್ಕಾರವು ಘೋಷಿಸಿರುತ್ತದೆ. |

| | | |
|---|---|---|
| | | ಕಲಬುರಗಿ, ಬೀದರ್ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ನೆಟೆರೋಗದಿಂದ ತೊಗರಿ ಬೆಳೆ ಹಾನಿಗೊಳಗಾದ ರೈತರಿಗೆ ಪರಿಹಾರ ಒದಗಿಸಲು ಈಗಾಗಲೇ ಬಿಡುಗಡೆಯಾದ ರೂ.74.00 ಕೋಟಿಗಳ ಪೈಕಿ ರೂ.65.00 ಕೋಟಿ ಪರಿಹಾರವನ್ನು ಕಲಬುರಗಿ ಜಿಲ್ಲೆಯ 75181 ಅರ್ಹ ರೈತ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಕೇಂದ್ರೀಕೃತ ನೇರ ನಗದು ವರ್ಗಾವಣೆಯನ್ನು ಮಾಡಲಾಗಿರುತ್ತದೆ. ಉಳಿದ ಅನುದಾನದ ವರ್ಗಾವಣೆ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |

ಸಂಖ್ಯೆ: AGRI/107/ACT/2023

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು